## ಕರ್ನಾಟಕ ಸರ್ಕಾರದ ನಡವಳಿಗಳು.

ವಿಷಯ:- ಶ್ರೀ ದಿಲೀಪ್ ಬಸವಣ್ಣಪ್ಪ ಹುಗ್ಗಿ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಶೃಂಗೇರಿ, ಚಿಕ್ಕಮಗಳೂರು ಜಿಲ್ಲೆ, ಇವರ ಅಮಾನತ್ತು ಆದೇಶವನ್ನು ಹಿಂಪಡೆಯುವ ಬಗ್ಗೆ.

ಓದಲಾಗಿದೆ: 1. .ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 251 ವಿಸೇಬಿ 2015, ದಿನಾಂಕ:18-01-2016.

2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ, ಚಿಕ್ಕಮಗಳೂರು ಇವರ ಪತ್ರ ಸಂಖ್ಯೆ: ಜಿಪಂಚಿ/ಆ2/ಸಿಬ್ಬಂದಿ/ಸಿಆರ್11/2015-16 ದಿ: 17-02-2016.

ಪ್ರಸ್ತಾವನೆ:-

ಶ್ರೀ ದಿಲೀಪ್ ಬಸವಣ್ಣಪ್ಪ ಹುಗ್ಗಿ, ಇವರು ಕಾರ್ಯನಿರ್ವಾಹಕ ಅಧಿಕಾರಿಯಾಗಿ ತಾಲ್ಲೂಕು ಪಂಚಾಯಿತಿ ಶೃಂಗೇರಿ, ಚಿಕ್ಕಮಗಳೂರು ಜಿಲ್ಲೆ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಚಿಕ್ಕಮಗಳುರು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಪೂರ್ವಾನುಮತಿ ಪಡೆಯದೆ, ತಾವು ಹೊಂದಿರುವ ಹುದ್ದೆಯ ಪ್ರಭಾರವನ್ನು ಬೇರೊಬ್ಬ ಅಧಿಕಾರಿಗೆ ಹಸ್ತಾಂತರಿಸದೆ ಕಂದ್ರದ ಸ್ಥಾನ ಬಿಟ್ಟು ದೀರ್ಘಕಾಲಿಕ ರಜೆಯ ಮೇಲೆ ತೆರಳಿ ತೀವ್ರ ಸ್ವರೂಪದ ದುರ್ನಡತೆ ಎಸಗಿರುವ ಆರೋಪ ಕುರಿತಂತೆ ಸದರಿ ಅಧಿಕಾರಿಯನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ದಿನಾಂಕ: 18-01-2016 ರ ಆದೇಶದಲ್ಲಿ ಸೇವೆಯಿಂದ ಅಮಾನತ್ತುಗೊಳಿಸಲಾಗಿತ್ತು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾಪಂಚಾಯತಿ ಚಿಕ್ಕಮಗಳೂರು ಇವರು ಮೇಲೆ ಓದಲಾದ ದಿನಾಂಕ: 17-02-2016 ರ ಪತ್ರದಲ್ಲಿ, ಶ್ರೀ ದಿಲೀಪ್ ಬಸವಣ್ಣಪ್ಪ ಹುಗ್ಗಿ, ಇವರು ದಿನಾಂಕ: 30-12-2015 ರಿಂದಲೆ ಕರ್ತವ್ಯಕ್ಕೆ ಹಾಜರಾಗಿದ್ದು, ಅವರಿಗೆ ವಹಿಸಲಾಗಿದ್ದ ಕರ್ತವ್ಯಗಳನ್ನು ನಿರ್ವಹಿಸುತ್ತಿರುವುದರಿಂದ ದಿನಾಂಕ: 18-01-2016 ರ ಅಮಾನತ್ತು ಆದೇಶವನ್ನು ಸದರಿ ಅಧಿಕಾರಿಗೆ ಜಾರಿ ಮಾಡಿರುವುದಿಲ್ಲ ಹಾಗೂ ಸದರಿ ಅಧಿಕಾರಿಯು ದಿನಾಂಕ: 31-03-2016 ರಂದು ವಯೋ ನಿವೃತ್ತಿ ಹೊಂದುತ್ತಿರುವುದರಿಂದ ಅಮಾನತ್ತು ಆದೇಶವನ್ನು ರದ್ದುಗೊಳಿಸುವಂತೆ ಸರ್ಕಾರಕ್ಕೆ ಕೋರಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಶ್ರೀ ದಿಲೀಪ್ ಬಸವಣ್ಣಪ್ಪ ಹುಗ್ಗಿ, ಇವರು ಈಗಾಗಲೇ ದಿನಾಂಕ: 31-03-2016 ರಂದು ವಯೋ ನಿವೃತ್ತಿ ಹೊಂದಿರುವುದರಿಂದ ಸದರಿಯವರ ಅಮಾನತ್ತು ಆದೇಶವನ್ನು ಹಿಂಪಡೆಯಲು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 251 ವಿಸೇಬಿ 2015, ಬೆಂಗಳೂರು ದಿನಾಂಕ: 13-06-2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ದಿಲೀಪ್ ಬಸವಣ್ಣಪ್ಪ ಹುಗ್ಗಿ, ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯಿತಿ ಶೃಂಗೇರಿ, ಚಿಕ್ಕಮಗಳೂರು ಜಿಲ್ಲೆ ಇವರ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 251 ವಿಸೇಬಿ 2015, ದಿನಾಂಕ: 18-01-2016 ರ ಅಮಾನತ್ತು ಆದೇಶವನ್ನು ಹಿಂಪಡೆದು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

13/6/2016

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇ-ಜಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ: ಮಹಾಲೇಖಪಾಲರು,(ಎ&ಇ) ಕರ್ನಾಟಕ, ಬೆಂಗಳೂರು.

GO

2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು.
3. ಸಂಬಂಧಿಸಿದ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ಇವರ ಮುಖಾಂತರ)

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2) ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಹೊರಡಿಸಿದೆ 14/6
ದಿನಾಂಕ..........
ಗ್ರಾ.ಅ.ಪಂ. ಇಲಾಖೆ

GO